ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: **27/2025**

ಪಿಡಬ್ಲ್ಯೂ- **4**
ಸಿಡಬ್ಲ್ಯೂ- **6**

ಸಾಕ್ಷಿಗೆ ದಿನಾಂಕ **02-04-2026** ರಂದು ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು | : | ಮಧು ಬಿ.ಎಸ್. |
| ತಂದೆಯ ಹೆಸರು | : | ಶಿವಮೂರ್ತಿ |
| ವಯಸ್ಸು | : | 38 ವರ್ಷ |
| ಉದ್ಯೋಗ | : | ಪೊಲೀಸ್ ಪೇದೆ |
| ವಾಸಸ್ಥಳ | : | ಹೊಸದುರ್ಗ |

<u>ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ</u>

ನಾನು 2014 ರಿಂದ ಇಲ್ಲಿಯವರೆಗೂ ಹೊಸದುರ್ಗ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿರುತ್ತೇನೆ .

ದಿನಾಂಕ 25-9-2024 ರಂದು ಸಂಜೆ 4-00 ಗಂಟೆ ಸಮಯದಲ್ಲಿ ಚಾಸಾ -1 ರವರು ಠಾಣೆಯಲ್ಲಿ ಇದ್ದಾಗ ಹೊಸದುರ್ಗ ತಾಲ್ಲೂಕು ಗೂಳಿಹಟ್ಟಿ ಗ್ರಾಮದ ಮೈಲಾರಪ್ಪ ತಂದೆ ಕೆಂಚಪ್ಪ, 42 ವರ್ಷ ಈತನು ತನ್ನ ವಾಸದ ಮನೆಯ ಮುಂದಿನ ಸಾರ್ವಜನಿಕ ಸ್ಥಳದಲ್ಲಿ ಸರ್ಕಾರದ ಯಾವುದೇ ಪರವಾನಿಗೆ ಇಲ್ಲದೆ ಅಕ್ರಮವಾಗಿ ಮದ್ಯದ ಪೌಚ್ ಗಳನ್ನು ಇಟ್ಟುಕೊಂಡು ಮಾರಾಟ ಮಾಡುತ್ತಿರುವ ಬಗ್ಗೆ ಬಾತ್ಮಿ ಬಂದಿದ್ದು ಈ ಬಗ್ಗೆ ಜ್ಞಾಪನವನ್ನು ತಯಾರಿಸಿ ಚಾಸಾ-9 ರವರಿಗೆ ಸಲ್ಲಿಸಿರುತ್ತಾರೆ. ನಂತರ ಸಿಬ್ಬಂದಿಗಳ ಮೂಲಕ ಪಂಚರಾದ ಚಾಸಾ-2 ಮತ್ತು 3 ರವರನ್ನು ಠಾಣೆಗೆ ಬರಮಾಡಿಕೊಂಡು ಅವರಿಗೆ ನೋಟೀಸ್ ಜಾರಿ ಮಾಡಿ, ದಾಳಿ ಮಾಡುವ ಸಮಯದಲ್ಲಿ ಪಂಚರಾಗಿ ಸಹಕರಿಸುವಂತೆ ಕೋರಿದ್ದು ಅವರು ಒಪ್ಪಿಕೊಂಡಿರುತ್ತಾರೆ. ನಂತರ ಚಾಸಾ 1, ಸಿಬ್ಬಂದಿಗಳಾದ ನಾನು, ಚಾಸಾ 4 ಮತ್ತು 5 ರವರು ಪಂಚರೊಡನೆ ಇಲಾಖಾ ವಾಹನದಲ್ಲಿ ಮಾಹಿತಿ ಬಂದ ಗೂಳಿಹಟ್ಟಿ ಗ್ರಾಮಕ್ಕೆ ತೆರಳಿ ಆರೋಪಿ ಮನೆಯ ಹತ್ತಿರ ಇರುವ ಸಾರ್ವಜನಿಕ ಸ್ಥಳದ ಹತ್ತಿರ ಹೋಗಿ ಮರೆಯಲ್ಲಿ ನಿಂತು ನೋಡಿದಾಗ ಒಬ್ಬ ವ್ಯಕ್ತಿ ತನ್ನ ಮನೆಯ ಮುಂಭಾಗಕ್ಕೆ ಬರುವ ಸಾರ್ವಜನಿಕರಿಗೆ ತನ್ನ ಬಳಿ ಇರುವ ಮದ್ಯದ ಪೌಚ್ ಗಳನ್ನು ಮಾರಾಟ ಮಾಡುತ್ತಿದ್ದರು. ಸಮವಸ್ತ್ರದಲ್ಲಿ ಇದ್ದ ನಮ್ಮನ್ನು ನೋಡಿ ಓಡಿ ಹೋಗಲು ಪ್ರಯತ್ನಿಸಿದ್ದು ಆತನನ್ನು ಬೆನ್ನತ್ತಿ ಹಿಡಿದುಕೊಂಡೆವು. ನಂತರ ಸ್ಥಳಕ್ಕೆ ಹೋಗಿ ನೋಡಲಾಗಿ ಸ್ಥಳದಲ್ಲಿ ನೋಡಲಾಗಿ 90 ಎಂ ಎಲ್ ನ 35 ರಾಜಾ ವಿಸ್ಕಿಯ ಪೌಚ್ ಗಳು ಇರುವುದು ಕಂಡುಬಂತು. ಸದರಿ

ಮದ್ಯ ಸಂಗ್ರಹಣೆ ಮಾಡಿದ ಬಗ್ಗೆ ಆರೋಪಿ ಬಳಿ ಯಾವುದೇ ದಾಖಲೆ ಅಥವಾ ರಹದಾರಿಪತ್ರ ಇರುವುದಿಲ್ಲ ಎಂದು ಖಚಿತಪಡಿಸಿಕೊಂಡು ದೊರೆತ ಎಲ್ಲಾ ಪ್ಯಾಕುಗಳನ್ನು ರಾಸಾಯನಿಕ ಪರೀಕ್ಷೆಗಾಗಿ ಪಂಚರ ಸಮಕ್ಷಮ ಮಾದರಿಗೆ ತೆಗೆದು ಚೀಲದಿಂದ ಸುತ್ತಿ ದಾರದಿಂದ ಕಟ್ಟಿ ಕೆ.ಎಸ್.ಪಿ ಎಂಬ ಅರಗು ಸೀಲು ಕ್ರಮ ಜರುಗಿಸಲಾಯಿತು. ಆರೋಪಿಯ ಹೆಸರು ವಿಳಾಸ ಕೇಳಲಾಗಿ ಗೂಳಿಹಟ್ಟಿ ಗ್ರಾಮದ ಮೈಲಾರಪ್ಪ ತಂದೆ ಕೆಂಚಪ್ಪ, 42 ವರ್ಷ ಎಂದು ತಿಳಿಸಿದರು. ಮಹಜರ್ ಕ್ರಮವನ್ನು ಸಂಜೆ 5-20 ರಿಂದ 6-20 ರವರೆಗೆ ಬರೆದು ಮುಗಿಸಲಾಯಿತು. ನಂತರ ಆರೋಪಿಗೆ ವಿಚಾರಣಾ ನೊಟೀಸ್ ನೀಡಲಾಯಿತು .

ಆ ದಿನ ಸ್ಥಳದಲ್ಲಿ ಹಾಜರಿದ್ದು ವಿಚಾರಣೆ ನೊಟೀಸ್ ನೀಡಿದ ವ್ಯಕ್ತಿಯನ್ನು ನೋಡಿದರೆ ಗುರುತಿಸುತ್ತೇನೆ. ಸದರಿ ವ್ಯಕ್ತಿ ಈ ದಿನ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿ. ರಾಸಾಯನಿಕ ಪರೀಕ್ಷೆಗಾಗಿ ಮಾದರಿಗೆ ತೆಗೆದ 90 ಎಂ ಎಲ್ ನ 35 ರಾಜಾ ವಿಸ್ಕಿಯ ಪೌಚ್‌ಗಳನ್ನು ಸಾಕ್ಷಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ಒಟ್ಟಾಗಿ ಮುದ್ದೆ ಮಾಲು 1 ಎಂದು ಗುರುತಿಸಲಾಗಿದೆ.

<u>ಪಾಟೀ ಸವಾಲು ಶ್ರೀ ಟಿ ಆರ್ ಎಸ್ ಆರೋಪಿ ಪರ ವಕೀಲರಿಂದಃ</u>

ದಿಃ25-9-2024 ರಂದು ಚಾಸಾ -1 ರವರು ಮಾಹಿತಿ ಬಂದ ತಕ್ಷಣ ಜ್ಞಾಪನವನ್ನು ತಯಾರು ಮಾಡಿರುತ್ತಾರೆ. ಜ್ಞಾಪನವನ್ನು ತಯಾರು ಮಾಡಿದ ನಂತರ ಕೃತ್ಯ ಸ್ಥಳಕ್ಕೆ ಹೋಗಿದ್ದು ಕೃತ್ಯ ಸ್ಥಳದ ಬಗ್ಗೆ ಬಾತ್ಮಿದಾರರು ಖಚಿತ ಮಾಹಿತಿ ನೀಡಿದ್ದರು . ನಾನು ಸ್ಥಳಕ್ಕೆ ಹೋದಾಗ ಸಂಜೆ 5-15 ಆಗಿತ್ತು. ಪ್ರ.ವ. ವರದಿಯನ್ನು ಸಂಜೆ 4-10 ಕ್ಕೆ ತಯಾರು ಮಾಡಲಾಗಿರುತ್ತದೆ ಎಂದರೆ ಸರಿ. ದಿಃ 25-9-2024 ರಂದು ಯಾವುದೇ ಬಾತ್ಮಿ ಬಂದಿರುವುದಿಲ್ಲ ಮತ್ತು ನಾವು ಯಾವುದೇ ಅಬಕಾರಿ ದಾಳಿ ಮಾಡಿಲ್ಲ ಎಂದರೆ ಸರಿಯಲ್ಲ. ನಿಪಿ-1 ರಂತೆ ಯಾವುದೇ ಮಹಜರ್ ಕ್ರಮ ಜರುಗಿಸಿಲ್ಲ ಎಂದರೆ ಸರಿಯಲ್ಲ. ಚಾಸಾ-2 ಮತ್ತು 3 ರವರನ್ನು ದಾಳಿಗೆ ಕರೆದುಕೊಂಡು ಹೋಗಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾ-2 ಮತ್ತು 3 ರವರ ಸಹಿಗಳನ್ನು ನಿಪಿ-1 ಕ್ಕೆ ಸ್ಥಳದಲ್ಲಿ ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-1 ರಡಿಯಲ್ಲಿ ಮುದ್ದೆ ಮಾಲನ್ನು ಅಮಾನತ್ತುಪಡಿಸಿಕೊಂಡಿರುತ್ತೇವೆ ಎಂದು ಸುಳ್ಳು ಸಾಕ್ಷ್ಯ ನುಡಿಯತಿದ್ದೇನೆ ಎಂದರೆ ಸರಿಯಲ್ಲ. ಠಾಣಾ ಅಂಕಿಸಂಖ್ಯೆಗೋಸ್ಕರ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯತ್ತಿದ್ದೇನೆ ಎಂದರೆ ಸರಿಯಲ್ಲ. ನಿ.ಪಿ-1,2,5 ರಿಂದ 7 ರ ದಾಖಲೆಗಳನ್ನು ಠಾಣೆಯಲ್ಲೇ ಸೃಷ್ಠಿಸಿರುತ್ತೇವೆ ಎಂದರೆ ಸರಿಯಲ್ಲ. ಮು.ಮಾ ಗೂ ಆರೋಪಿಗೂ ಮತ್ತು ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ಈ ಪ್ರಕರಣದ ಆರೋಪಿಯನ್ನು ಈ ದಿನವೇ ನಾನು ಮೊದಲಬಾರಿ ನೋಡುತ್ತಿರುವುದು ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ ಇದೆ.

ನನ್ನ ಸಮಕ್ಷಮ

ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಹೊಸದುರ್ಗ.